ಆ) ರಾಜ್ಯದಲ್ಲಿ ವಿದ್ಯುತ್ ಉತ್ಪಾದನೆಯನ್ನು ಗರಿಷ್ಠಗೊಳಿಸಲಾಗಿದೆ. ಅಲ್ಲದೇ ಕೇಂದ್ರ ಸರ್ಕಾರದ ವಿದ್ಯುತ್ ಉತ್ಪಾದನಾ ಕೇಂದ್ರಗಳಿಂದ ರಾಜ್ಯದ ವಿದ್ಯುತ್ ಪಾಲನ್ನು ಸಂಪೂರ್ಣವಾಗಿ ಪಡೆಯಲಾಗುತ್ತಿದೆ. ನೆರೆರಾಜ್ಯವಾದ ಮಹಾರಾಷ್ಟ್ರದಿಂದ ವಿದ್ಯುತ್ ನೆರವನ್ನು ಪಡೆಯಲು ಪ್ರಯತ್ನಿಸಲಾಗುತ್ತಿದೆ.

ಸೊರಬ ತಾಲ್ಲೂಕಿನಲ್ಲಿರುವ ಕೆರೆಗಳ ದುರಸ್ಥಿ.

21 (129)

ಶ್ರೀ ಎಸ್.ಕುಮಾರ್ ಬಂಗಾರಪ್ಪ (ಸೊರಬ): ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸೊರಬ ತಾಲ್ಲೂಕಿನಲ್ಲಿ 1997ರ ಅತಿವೃಷ್ಟಿ ಮಳೆಯಿಂದಾಗಿ ಒಡೆದುಹೋದ ಕೆರೆಗಳು ಎಷ್ಟು?

ಆ) ಸದರಿ ಕೆರೆಗಳ ದುರಸ್ಥಿಗಾಗಿ ಸರ್ಕಾರದವರು ಮಂಜೂರು ಮಾಡಿದ ಹಣವೆಷ್ಟು? ಹಾಗೂ ಖರ್ಚಾಗಿದ್ದ ಹಣವೆಷ್ಟು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):

ಅ) 16 ಕೆರೆಗಳು.

ಆ) ಶಿವಮೊಗ್ಗ ಜಿಲ್ಲೆಯ ಜಿಲ್ಲಾಧಿಕಾರಿಗಳಿಂದ 6.70 ಲಕ್ಷ ಅನುದಾನವನ್ನು ಹಾಗೂ ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ, ಬೆಂಗಳೂರು, ಇವರಿಂದ 2.44 ಲಕ್ಷ ರೂ. ಒಟ್ಟು 9.14 ಲಕ್ಷ ರೂ.ಗಳು ಅನುದಾನವನ್ನು ಹಾನಿಗೊಳಪಟ್ಟ ಮತ್ತು ಒಡೆದುಹೋದ ಕೆರೆಗಳ ದುರಸ್ತಿಕಾರ್ಯಕ್ಕೆ ಒದಗಿಸಲಾಗಿದೆ. ಇದರಲ್ಲಿ 2.70 ಲಕ್ಷ ರೂ.ಗಳು ಖರ್ಚಾಗಿದೆ. ದುರಸ್ತಿ ಕಾರ್ಯ ಪ್ರಗತಿಯಲ್ಲಿದೆ.

ಮೈಸೂರು ನರಸಿಂಹ ರಾಜ ಕ್ಷೇತ್ರದಲ್ಲಿ ಅಸಮರ್ಪಕ ವಿದ್ಯುತ್ ಸರಬರಾಜು

22 (56)

ಶ್ರೀ ಇ.ಮಾರುತಿ ರಾವ್ ಪವಾರ್ (ನರಸಿಂಹರಾಜ): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನರಸಿಂಹರಾಜ ಕ್ಷೇತ್ರದ ಗಾಂಧಿನಗರ, ಕರುಣಾಪುರ ವ್ಯಾಪ್ತಿಗೆ ಟಿ.ನರಸೀಪುರದಿಂದ ಬರುವ ವಿದ್ಯುತ್ ಲೈನ್‌ನಿಂದ ಸರಬರಾಜು ಆಗುತ್ತಿದ್ದು ನಾರ್ತ್ ಈಸ್ಟ್ ಆಫ್ ಎನ್.ಆರ್.ಮೊಹಲ್ಲಾ ಪವರ್ ಹೌಸ್ ಅತೀ ಸಮೀಪವಿದ್ದು ಇದರಿಂದ